# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2022-23 ನೇ ಸಾಲಿನಲ್ಲಿ ಮತ್ಸ್ಯಾಶ್ರಯ ಯೋಜನೆಯಡಿ ನಿರ್ವಸತಿ ಮೀನುಗಾರರಿಗೆ 5000 ಮನೆಗಳನ್ನು ಹಂಚಿಕೆ ಮಾಡುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:- ಮೀನುಗಾರಿಕೆ ನಿರ್ದೇಶಕರ ಏಕ ಕಡತ ಪತ್ರ ಸಂಖ್ಯೆ: DoF-TECHO-FYP1/14/2022, ದಿನಾಂಕ: 15-03-2022.

******

**ಪ್ರಸ್ತಾವನೆ:**

2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-63 ರಲ್ಲಿ ಪ್ರಸಕ್ತ ಸಾಲಿನಲ್ಲಿ 5000 ವಸತಿರಹಿತ ಮೀನುಗಾರರಿಗೆ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಆದ್ಯತೆ ಮೇರೆಗೆ ಮನೆಗಳನ್ನು ನಿರ್ಮಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಏಕ ಕಡತ ಪತ್ರದಲ್ಲಿ, ವಸತಿ ರಹಿತ ಮೀನುಗಾರರಿಗೆ ವಸತಿ ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಕೇಂದ್ರ ಪುರಸ್ಕೃತ ರಾಷ್ಟ್ರೀಯ ಮೀನುಗಾರರ ಕಲ್ಯಾಣ ನಿಧಿ ಯೋಜನೆಯಡಿ ಮೀನುಗಾರರ ಮಾದರಿ ಗ್ರಾಮಗಳ ಅಭಿವೃದ್ಧಿ ಯೋಜನೆಯನ್ನು 1987-88 ರಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ಸ್ವಂತ ನಿವೇಶನ ಹೊಂದಿರುವ ನಿರ್ವಸತಿ ಮೀನುಗಾರರಿಗೆ 1987-88 ರಿಂದ 2017-18 ರವರೆಗೆ ಒಟ್ಟು 41905 ಮನೆಗಳು ಮಂಜೂರಾಗಿರುತ್ತವೆ. 2006-07 ನೇ ಸಾಲಿನಿಂದ "ಮತ್ಸ್ಯಾಶ್ರಯ ಯೋಜನೆ" ಯನ್ನು ರಾಜ್ಯ ಸರ್ಕಾರದಿಂದ ಪ್ರಾರಂಭಿಸಲಾಗಿದ್ದು, ಈ ಯೋಜನೆಯಡಿ ಪ್ರತಿವರ್ಷ ಅನುದಾನ ಲಭ್ಯತೆಗೆ ಅನುಗುಣವಾಗಿ ವಸತಿ ರಹಿತ ಮೀನುಗಾರರಿಗೆ ಅಥವಾ ವಾಸಕ್ಕೆ ಯೋಗ್ಯವಾದ ಮನೆ ಇಲ್ಲದ ಮೀನುಗಾರರಿಗೆ ನೀಡಲು ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ ಎಂದು ತಿಳಿಸಿರುತ್ತಾರೆ.

2013-14ನೇ ಸಾಲಿನಿಂದ 2016-17ನೇ ಸಾಲಿನವರೆಗೆ ಮಂಜೂರಾದ 10,121 ಮನೆಗಳನ್ನು ಸರ್ಕಾರದಿಂದ ನೇಮಿಸಿರುವ ನೋಡಲ್ ಏಜೆನ್ಸಿಯಾದ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿದೆ. 2017-18ನೇ ಸಾಲಿನಿಂದ ಈ ಯೋಜನೆಯಡಿಯಲ್ಲಿ ಪ್ರಸ್ತುತ ಗ್ರಾಮೀಣ ಪ್ರದೇಶದ ಸಾಮಾನ್ಯ ವರ್ಗಕ್ಕೆ ಸೇರಿದ ಫಲಾನುಭವಿಗಳಿಗೆ ರೂ.1.20 ಲಕ್ಷ ಪರಿಶಿಷ್ಟಜಾತಿ / ಪಂಗಡ ಫಲಾನುಭವಿಗಳಿಗೆ ರೂ.1.75 ಲಕ್ಷ ಮತ್ತು ನಗರ ಪ್ರದೇಶದ ಪರಿಶಿಷ್ಟ ಜಾತಿ / ಪಂಗಡದ ಫಲಾನುಭವಿಗಳಿಗೆ ರೂ.2.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ ಎಂದು ತಿಳಿಸುತ್ತಾ, 2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-63 ರಲ್ಲಿ ಘೋಷಣೆಯಾದ 5000 ಮನೆಗಳನ್ನು ಈ ಕೆಳಕಂಡಂತೆ ವರ್ಗವಾರು ಹಂಚಿಕೆ ಮಾಡಬೇಕಿರುತ್ತದೆ ಎಂದು ತಿಳಿಸಿರುತ್ತಾರೆ.

| ಕ್ರಮ ಸಂಖ್ಯೆ | ವರ್ಗ | ಗ್ರಾಮೀಣ | ನಗರ (ಅಂದಾಜು ಶೇ.10) | ಒಟ್ಟು |
|---|---|---|---|---|
| 1 | ಪರಿಶಿಷ್ಟ ಜಾತಿ | 772 | 86 | 858 |
| 2 | ಪರಿಶಿಷ್ಟ ಪಂಗಡ | 313 | 35 | 348 |
| 3 | ಸಾಮಾನ್ಯ | - | - | 3794 |
| | | | ಒಟ್ಟು | 5000 |

-2-

ಮೇಲಿನಂತೆ ವರ್ಗವಾರು ಹಂಚಿಕೆ ಮಾಡಲಾದ ಪ್ರತಿ ವರ್ಗಗಳಿಗೆ ಪ್ರಸ್ತುತ ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಜಾರಿಯಲ್ಲಿರುವ ಸಹಾಯಧನ ಮಾದರಿಯಂತೆ ಯೋಜನೆ ಅನುಷ್ಠಾನ ಮಾಡಲು ಈ ಕೆಳಕಂಡ ಮಾನದಂಡಗಳನ್ನೊಳಗೊಂಡಂತೆ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

**ಮತ್ಸ್ಯಾಶ್ರಯ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಸರಿಸಬೇಕಾದ ಮಾನದಂಡಗಳು ಈ ಕೆಳಗಿನಂತಿರುತ್ತವೆ.**

1. ಫಲಾನುಭವಿಯು ಹುಟ್ಟು / ವೃತ್ತಿಯಲ್ಲಿ ಮೀನುಗಾರನಾಗಿರಬೇಕು. ಮೀನುಗಾರಿಕೆಗೆ ಪೂರಕವಾದ ಚಟುವಟಿಕೆಗಳಲ್ಲಿ ತೊಡಗಿರುವವರನ್ನು ಸಹ ಆಯ್ಕೆ ಮಾಡಬಹುದಾಗಿದೆ.
2. ಫಲಾನುಭವಿಯು ವಿವಾಹಿತನಾಗಿರಬೇಕು.
3. ಫಲಾನುಭವಿಯು ಸ್ವಂತ ನಿವೇಶನ ಹೊಂದಿರತಕ್ಕದ್ದು.
4. ಫಲಾನುಭವಿಯು ಸ್ಥಳೀಯ ಮೀನುಗಾರರ ಸಹಕಾರ ಸಂಘದ ಸದಸ್ಯನಾಗಿರಬೇಕು. ಇಲ್ಲದಿದ್ದಲ್ಲಿ ಕಳೆದ ಮೂರು ವರ್ಷಗಳಿಂದ ಮೀನುಗಾರಿಕೆಯಲ್ಲಿ ತೊಡಗಿರುವ ಬಗ್ಗೆ ಸಂಬಂಧಿಸಿದ ಮೀನುಗಾರಿಕೆ ಸಹಾಯಕ ನಿರ್ದೇಶಕರು ರವರು ದೃಢೀಕರಿಸಬೇಕು.
5. ಫಲಾನುಭವಿಯು ಸರ್ಕಾರದ ಇತರೆ ವಸತಿ ಯೋಜನೆಯಡಿ ಸೌಲಭ್ಯವನ್ನು ಪಡೆದಿರಬಾರದು. ಈ ಬಗ್ಗೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿ, ಮುನಿಸಿಪಾಲಿಟಿ, ನಗರ ಸಭೆ ಮುಂತಾದ ಸಂಸ್ಥೆಗಳಿಂದ ದೃಢೀಕರಣ ಹೊಂದಿರತಕ್ಕದ್ದು.
6. ಫಲಾನುಭವಿಯು ಆರ್ಥಿಕವಾಗಿ ಹಿಂದುಳಿದವರಾಗಿರತಕ್ಕದ್ದು.
7. ಮನೆಯ ಅಳತೆ 215 ರಿಂದ 375 ಚದರ ಅಡಿ ಒಳಗೆ ಇರತಕ್ಕದ್ದು.

ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳಿಗೆ ಫಲಾನುಭವಿಗಳ ಆಯ್ಕೆಯನ್ನು ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 112 ಮೀಇಯೋ 2007 (ಭಾಗ) ದಿನಾಂಕ: 31-07-2008 ಮತ್ತು ಸಂಖ್ಯೆ: ಪಸಂಮೀ ಇ-275 ಮೀಇಯೋ 2021, ದಿನಾಂಕ: 04-10-2021 ರಂತೆ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

**ಆಯ್ಕೆ ಸಮಿತಿಯ ವಿವರ**

**ಅಧ್ಯಕ್ಷರು:** ಆಯಾ ವಿಧಾನ ಸಭಾ ಕ್ಷೇತ್ರದ ಶಾಸಕರು

**ಸಹ ಅಧ್ಯಕ್ಷರು:** ವಿಧಾನ ಪರಿಷತ್ತಿನ ಸದಸ್ಯರು (ಅವರ ವ್ಯಾಪ್ತಿಯ ಅಪೇಕ್ಷಿಸಿದ ಯಾವುದಾದರೊಂದು ವಿಧಾನ ಸಭಾ ಕ್ಷೇತ್ರಕ್ಕೆ ಸೀಮಿತವಾದಂತೆ)

**ಸದಸ್ಯ ಕಾರ್ಯದರ್ಶಿ:** ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಮತ್ಸ್ಯಾಶ್ರಯ ಯೋಜನೆಯಡಿ ವಸತಿ ಸೌಲಭ್ಯವನ್ನು ಪಡೆಯುವ ಫಲಾನುಭವಿಯು ಮೇಲೆ ಪಟ್ಟಿ ಮಾಡಲಾದ ಅರ್ಹತೆಗಳ ಮೇರೆಗೆ ಆಯ್ಕೆ ಸಮಿತಿಯು ಕಾರ್ಯನಿರ್ವಹಿಸುವುದು.

**ಸಹಾಯಧನದ ವಿವರ**

ಮತ್ಸ್ಯಾಶ್ರಯ ಮನೆಯ ಕಾಮಗಾರಿಗಳನ್ನು ಅಡಿಪಾಯ, ಗೋಡೆ ಮತ್ತು ಛಾವಣಿ ಎಂದು 3 ವಿವಿಧ ಹಂತವನ್ನಾಗಿ ವಿಂಗಡಿಸಿದ್ದು, ಸದರಿ ಕಾಮಗಾರಿಗಳ ಪ್ರಗತಿಗೆ ಅನುಗುಣವಾಗಿ ಫಲಾನುಭವಿಗಳಿಗೆ ನಿರ್ಮಿಸುವ ಮನೆ ಕಾಮಗಾರಿಯ ಹಂತಕ್ಕೆ ತಕ್ಕಂತೆ ಮೂರು ಕಂತುಗಳಲ್ಲಿ ಸಹಾಯಧನವನ್ನು ಫಲಾನುಭವಿಗಳಿಗೆ ಬಿಡುಗಡೆ ಮಾಡಲಾಗುತ್ತಿದೆ. ಮೊದಲನೇ ಕಂತು ಶೇ.20 ರಷ್ಟು, ಎರಡನೇ ಕಂತು ಶೇ.40. ರಷ್ಟು ಮತ್ತು ಮೂರನೇ ಕಂತು ಶೇ.40 ರಷ್ಟರಂತೆ ನೀಡಲಾಗುವುದು.

## ಯೋಜನೆ ಅನುಷ್ಠಾನವು ಈ ಕೆಳಕಂಡಂತೆ ಇರತಕ್ಕದ್ದು

1. ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳ ಹಂಚಿಕೆಯನ್ನು ವಿಧಾನಸಭಾ ಕ್ಷೇತ್ರವಾರು ಸರ್ಕಾರ ಮಾಡುವುದು.
2. ಮತ್ಸ್ಯಾಶ್ರಯ ಯೋಜನೆಯಡಿ ಫಲಾನುಭವಿಗಳನ್ನು ಮೇಲೆ ತಿಳಿಸಿರುವ ಆಯ್ಕೆ ಸಮಿತಿಯ ಪ್ರಕಾರ ಆಯ್ಕೆ ಮಾಡಿ ಫಲಾನುಭವಿಗಳ ಪಟ್ಟಿಯನ್ನು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಕಳುಹಿಸತಕ್ಕದ್ದು.
3. ರಾಜೀವ್ ಗಾಂಧಿ ವಸತಿ ನಿಗಮವು ಸದರಿ ಫಲಾನುಭವಿಗಳ ದಾಖಲಾತಿ ಪಡೆದು ನಿಗಮದ ಮಾರ್ಗಸೂಚಿ ಅನ್ವಯ ಯೋಜನೆ ಅನುಷ್ಠಾನ ಮಾಡತಕ್ಕದ್ದು.
4. ಸದರಿ ಆಯ್ಕೆ ಸಮಿತಿಯ ನಡವಳಿಯಲ್ಲಿ ಫಲಾನುಭವಿಯ ಮಾಹಿತಿಯನ್ನು ಈ ಕೆಳಕಂಡ ನಮೂನೆಯಲ್ಲಿ ಸಂಗ್ರಹಿಸಿ ಸಭೆಯ ನಡವಳಿಯೊಂದಿಗೆ ಸಹಿ ಮಾಡಿ ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಕಳುಹಿಸತಕ್ಕದ್ದು.

| ಕ್ರಮ ಸಂಖ್ಯೆ | ಫಲಾನುಭವಿ ಹೆಸರು | ಗ್ರಾಮ | ವಿಧಾನಸಭಾ ಕ್ಷೇತ್ರ | ತಾಲ್ಲೂಕು | ಜಿಲ್ಲೆ | ಪಂಚಾಯಿತಿ ಹೆಸರು | ನಿವೇಶನದ ಮಾಹಿತಿ |
|---|---|---|---|---|---|---|---|
| | | | | | | | |

ಸಹಿ/-
ಅಧ್ಯಕ್ಷರು

ಸಹಿ/-
ಸದಸ್ಯ ಕಾರ್ಯದರ್ಶಿ

5. ಫಲಾನುಭವಿಗಳ ಆಯ್ಕೆಯನ್ನು ಸರ್ಕಾರದ ಆದೇಶ ಹೊರಡಿಸಿದ 3 ತಿಂಗಳ ಒಳಗೆ ಆಯ್ಕೆ ಮಾಡತಕ್ಕದ್ದು ತಪ್ಪಿದಲ್ಲಿ ಮನೆಗಳ ಮಂಜೂರು ರದ್ದಾಗುವುದು.
6. ಆಯಾ ಸಾಲಿನಲ್ಲಿ ಮಂಜೂರಾದ ಮನೆಗಳ ಕಾಮಗಾರಿಯನ್ನು ಅದೇ ವರ್ಷದ ಆರ್ಥಿಕ ಸಾಲಿನಲ್ಲಿ ಪೂರ್ಣಗೊಳಿಸತಕ್ಕದ್ದು. ತಪ್ಪಿದಲ್ಲಿ ನೀಡಲಾದ ಸಹಾಯಧನವನ್ನು ಭೂ ಕಂದಾಯ ಕಾಯ್ದೆ ಪ್ರಕಾರ ವಸೂಲು ಮಾಡುವುದು.
7. ಫಲಾನುಭವಿಗಳು ಆಯ್ಕೆಯು ಮತ್ಸ್ಯಾಶ್ರಯ ಆಯ್ಕೆ ಅಮಿತಿ ಮುಖಾಂತರ ಆಗುವುದರಿಂದ ಗ್ರಾಮಸಭೆಗಳಲ್ಲಿ ಫಲಾನುಭವಿ ಆಯ್ಕೆಯ ಅಗ್ಯವಿರುವುದಿಲ್ಲ.
8. ರಾಜೀವ್ ಗಾಂಧಿ ವಸತಿ ನಿಗಮವು ಪ್ರತಿ ಮಾಹೆಯ ಪ್ರಗತಿ ವರದಿಯನ್ನು ಆಯಾ ತಿಂಗಳ 5ನೇ ತಾರೀಖಿನೊಳಗಾಗಿ ಈ ಕೆಳಕಂಡ ನಮೂನೆಯಲ್ಲಿ ಮೀನುಗಾರಿಕೆ ನಿರ್ದೇಶನಾಲಯಕ್ಕೆ ನೀಡುವುದು.

| ಕ್ರಮ ಸಂಖ್ಯೆ | ಫಲಾನುಭವಿ ಹೆಸರು | ಗ್ರಾಮ | ವಿಧಾನಸಭಾ ಕ್ಷೇತ್ರ | ತಾಲ್ಲೂಕು | ಜಿಲ್ಲೆ | ಪ್ರಗತಿ ವಿವರಗಳು ರೂ.ಲಕ್ಷಗಳಲ್ಲಿ | | |
|---|---|---|---|---|---|---|---|---|
| | | | | | | 1ನೇ ಹಂತ | 2ನೇ ಹಂತ | 3ನೇ ಹಂತ |
| | | | | | | | | |

ಪ್ರಸ್ತುತ ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಇರುವ ಫಲಾನುಭವಿ ಆಯ್ಕೆ ವಿಧಾನದಲ್ಲಿ ಮೇಲ್ಕಂಡಂತೆ ತಿದ್ದುಪಡಿ ಮಾಡಿಕೊಳ್ಳಲು ಸೂಚಿಸಿ ಮೇಲಿನ ರೀತಿಯಲ್ಲಿ ಆದೇಶ ಹೊರಡಿಸಲು ಕೋರಿರುತ್ತಾರೆ.

-4-

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-99 ಮೀಇಯೋ 2022, ಬೆಂಗಳೂರು ದಿನಾಂಕ: 07-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-63 ರಂತೆ, ಪ್ರಸಕ್ತ ಸಾಲಿನಲ್ಲಿ 5000 ವಸತಿರಹಿತ ಮೀನುಗಾರರಿಗೆ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ವಸತಿ ಇಲಾಖೆಯಡಿ ಹೊಸದಾಗಿ ಮಂಜೂರಾಗಿರುವ 5.00 ಲಕ್ಷ ಮನೆಗಳಲ್ಲಿ ಆದ್ಯತೆ ಮೇರೆಗೆ 5000 ವಸತಿರಹಿತ ಮೀನುಗಾರರಿಗೆ ವಸತಿ ಇಲಾಖೆಯಿಂದ ತಯಾರಿಸಿದ ಫಲಾನುಭವಿಗಳ ಪಟ್ಟಿಯಂತೆ ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಜಾರಿಯಲ್ಲಿರುವ ಸಹಾಯಧನ ಮಾದರಿಯಂತೆ ಹಾಗೂ ನಿಗಮದ ಮಾನದಂಡಗಳನ್ನೊಳಗೊಂಡಂತೆ ಮನೆಗಳನ್ನು ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್-ಪಿಎಫ್‌ಒ/9/2022, ದಿನಾಂಕ: 29-03-2022 ರಲ್ಲಿ ಹಾಗೂ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ/53/ವೆಚ್ಚ-4/2022, ದಿನಾಂಕ: 05-04-2022 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kamakshi U.A 7/4/2022
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

07/04/2022

ಇವರಿಗೆ

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
5) ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
7) ವ್ಯವಸ್ಥಾಪಕ ನಿರ್ದೇಶಕರು, ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿ., ಐಟಿ ಪಾರ್ಕ್, 1ನೇ ಮಹಡಿ, 4ನೇ ಮುಖ್ಯ ರಸ್ತೆ, ರಾಜಾಜಿನಗರ ಕೈಗಾರಿಕಾ ಪ್ರದೇಶ, ರಾಜಾಜಿನಗರ, ಬೆಂಗಳೂರು-560 020.
8) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
10) ಎಲ್ಲಾ ಮೀನುಗಾರಿಕೆ ಜಂಟಿ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.

11) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
12) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
13) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
14) ಕಂಟ್ರೋಲ್ ರೂಮ್-ಕಂ-24x7 ಹೆಲ್ಪ್ ಲೈನ್ (ಸಹಾಯವಾಣಿ). ಮೀನುಗಾರಿಕೆ ಇಲಾಖೆ.
15) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.

**ಪ್ರತಿಯನ್ನು**

1) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿಗಳು. ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು / ಜಂಟಿ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು, ಪಸಂಮೀ ಇಲಾಖೆ, ವಿಕಾಸಸೌಧ, ಬೆಂಗಳೂರು.